ಕರ್ನಾಟಕ ಸರ್ಕಾರ
# ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ
(ಕರ್ನಾಟಕ ಸರ್ಕಾರದ ಅಂಗ ಸಂಸ್ಥೆ)
Government of Karnataka
# Karnataka Residential Educational Institutions Society
(An Organisation of Govt. of Karnataka)

ನೇಮಕಾತಿ ಪ್ರಾಧಿಕಾರಿ ಹಾಗೂ ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ,
ನಂ.8, ಎಂ.ಎಸ್.ಬಿ-1, 6 ಮತ್ತು 7ನೇ ಮಹಡಿ, ಕನ್ನಿಂಗ್‌ಹ್ಯಾಮ್ ರಸ್ತೆ, ಬೆಂಗಳೂರು.
ದೂರವಾಣಿ ಸಂಖ್ಯೆ: 080-22283366, 22204466, 22265755
ಇ-ಮೇಲ್: edkreis@rediff.com

## ಪ್ರಕಟಣೆ

ಸಂಖ್ಯೆ: ಕವಶಿಸಸ/ಆಡಳಿತ/ಹೊನೇ/ಸಿ.ಆರ್-01/2013-14 ದಿನಾಂಕ: 15/12/2017

ವಿಷಯ: ಮಾನ್ಯ ಕರ್ನಾಟಕ ಉಚ್ಛ ನ್ಯಾಯಾಲಯದ ರಿಟ್ ಪಿಟಿಷನ್/ರಿಟ್ ಅಪೀಲುಗಳ ತೀರ್ಪುಗಳಂತೆ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ, ಅಧೀನದ ವಸತಿ ಶಾಲೆಗಳಲ್ಲಿ ಹೊರಸಂಪನ್ಮೂಲದಿಂದ ನೇಮಕಗೊಂಡು ಕಾರ್ಯನಿರ್ವಹಿಸುತ್ತಿದ್ದ ಪ್ರಾಂಶುಪಾಲರು ಮತ್ತು ಸಹ ಶಿಕ್ಷಕರುಗಳಿಗೆ ಸೇವಾ ಕೃಪಾಂಕ ಪರಿಗಣಿಸಿ, ಆಯ್ಕೆಗೆ ಅರ್ಹರಾದ ಅಭ್ಯರ್ಥಿಗಳ ಆಯ್ಕೆಪಟ್ಟಿಯ ಪ್ರಕಟಣೆ ಕುರಿತು.

ಉಲ್ಲೇಖ:
1. ಮಾನ್ಯ ಉಚ್ಛ ನ್ಯಾಯಾಲಯದ ರಿಟ್ ಅರ್ಜಿ ಸಂಖ್ಯೆ: 20204-20364/2011 ಮತ್ತು ಇತರೆ ಸಂಯೋಜಿತ ಪ್ರಕರಣಗಳ ತೀರ್ಮಾನ ದಿ:13/07/2012.
2. ಮಾನ್ಯ ಕರ್ನಾಟಕ ಉಚ್ಛ ನ್ಯಾಯಾಲಯದ ರಿಟ್ ಮೇಲ್ಮನವಿ ಅರ್ಜಿ ಸಂಖ್ಯೆ: 5127/2012 ಮತ್ತು ಇತರೆ ಸಂಯೋಜಿತ ಪ್ರಕರಣಗಳ ತೀರ್ಮಾನ ದಿ:28.2.2013 ಮತ್ತು ರಿಟ್ ಅರ್ಜಿ ಸಂಖ್ಯೆ: 958-988/2015, ದಿ: 12/02/2015.
3. ಮಾನ್ಯ ಕರ್ನಾಟಕ ಉಚ್ಛ ನ್ಯಾಯಾಲಯದ, ಧಾರವಾಡ ಪೀಠದ ಮೇಲ್ಮನವಿ ಅರ್ಜಿ ಸಂಖ್ಯೆ: 31346/2012 ಮತ್ತು ಇತರ ಸಂಯೋಜಿತ ಪ್ರಕರಣಗಳ ತೀರ್ಮಾನ ದಿ: 21/03/2013.
4. ಮಾನ್ಯ ಉಚ್ಛ ನ್ಯಾಯಾಲಯದ ರಿಟ್ ಅರ್ಜಿ ಸಂಖ್ಯೆ: 113076/2014 ಮತ್ತು ಸಂಯೋಜಿತ ರಿಟ್ ಅರ್ಜಿಗಳಾದ 100572/2015 ಮತ್ತು 100573-582/2015, ದಿ: 21/01/2015.
5. ಈ ಕಛೇರಿಯ ಆಯ್ಕೆಪಟ್ಟಿ ಪ್ರಕಟಣೆ ಸಂಖ್ಯೆ: ಕವಶಿಸಸ/ಆಡಳಿತ/ಹೊನೇ/ಸಿ.ಆರ್-01/2013-14, ದಿನಾಂಕ: 19/10/2015, 08/02/2016, 02/08/2016 ಮತ್ತು 10/03/2017
6. ಮಾನ್ಯ ಕರ್ನಾಟಕ ಉಚ್ಛನ್ಯಾಯಾಲಯದ ರಿಟ್ ಅರ್ಜಿ ಸಂಖ್ಯೆ: 16005/2015 ಪ್ರಕರಣ ತೀರ್ಮಾನ ದಿ:25/01/2017.

*****

ಉಲ್ಲೇಖ (1) ರಿಂದ (4)ರ ವರೆಗಿನ ಮಾನ್ಯ ಕರ್ನಾಟಕ ಉಚ್ಛ ನ್ಯಾಯಾಲಯಗಳ ತೀರ್ಪುಗಳನ್ವಯ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಬೆಂಗಳೂರು ಇದರ ಅಧೀನದಲ್ಲಿರುವ ಮೊರಾರ್ಜಿ ದೇಸಾಯಿ/ಕಿತ್ತೂರು ರಾಣಿ ಚೆನ್ನಮ್ಮ/ಏಕಲವ್ಯ ಮಾದರಿ ವಸತಿ ಶಾಲೆಗಳಲ್ಲಿ ಹೊರಸಂಪನ್ಮೂಲ ಏಜೆನ್ಸಿ ವತಿಯಿಂದ/ಜಿಲ್ಲಾ ಪಂಚಾಯಿತಿಯಿಂದ ತಾತ್ಕಾಲಿಕವಾಗಿ ನೇಮಕಗೊಂಡು ಕಾರ್ಯನಿರ್ವಹಿಸುತ್ತಿದ್ದ ಪ್ರಾಂಶುಪಾಲರು ಮತ್ತು ಸಹ ಶಿಕ್ಷಕರುಗಳಿಗೆ ಸೇವಾ ಕೃಪಾಂಕ ನೀಡಿ, ನಿಬಂಧನೆಗಳನುಸಾರ ಮೂಲದಾಖಲಾತಿಗಳ ಪರಿಶೀಲನೆ ನಡೆಸಿ, ಅರ್ಹರೆಂದು ಕಂಡುಬಂದ ಅಭ್ಯರ್ಥಿಗಳಿಗೆ ಉಲ್ಲೇಖ (5) ಆದೇಶಗಳಲ್ಲಿ ಕ್ರಮವಾಗಿ 19/10/2015 ರಲ್ಲಿ 409 ಅಭ್ಯರ್ಥಿಗಳ, 08/02/2016 172 ಅಭ್ಯರ್ಥಿಗಳ ಮತ್ತು 02/08/2016 ರಲ್ಲಿ 07 ಜನ ಅಭ್ಯರ್ಥಿಗಳ ಆಯ್ಕೆಪಟ್ಟಿಯನ್ನು ಪ್ರಕಟಿಸಲಾಗಿತ್ತು. ತದನಂತರ, ಉಲ್ಲೇಖ (6) ರಂತೆ ಮಾನ್ಯ ಉಚ್ಛನ್ಯಾಯಾಲಯದಲ್ಲಿ ನೇಮಕಾತಿಗೆ ಸಂಬಂಧಿಸಿದಂತೆ ತಡೆಯಾಜ್ಞೆಯಾಗಿದ್ದು, ನಂತರ ಸದರಿ ಪ್ರಕರಣಕ್ಕೆ ಸಂಬಂಧಿಸಿದಂತೆ ಮಾನ್ಯ ಉಚ್ಛನ್ಯಾಯಾಲಯದ ಅಂತಿಮ

(ಪು.ತಿ.ನೋ.)

ತೀರ್ಮಾನದಂತೆ ಈ ಕೆಳಕಂಡ ಅಭ್ಯರ್ಥಿಯಿಂದ ಆಯ್ಕೆಗೆ ಪರಿಗಣಿಸುವಂತೆ ಕೋರಿ ಬಂದ ಮನವಿಯನ್ನು ಪುನರ್ ಪರಿಶೀಲನೆ ನಡೆಸಿ, ಅಭ್ಯರ್ಥಿಯ ಆಯ್ಕೆಪಟ್ಟಿಯನ್ನು ಮುಂದೆ ತಿಳಿಸಿರುವ ನಿಬಂಧನೆಗಳಿಗೊಳಪಟ್ಟು ಪ್ರಕಟಿಸಲಾಗಿದೆ.

ಹುದ್ದೆ: ವಿಜ್ಞಾನ ಸಹ ಶಿಕ್ಷಕರು

| ಕ್ರ.ಸಂ. | ನೋ.ಸಂ. | ಅಭ್ಯರ್ಥಿಯ ಹೆಸರು | ಲಿಂಗ | ಪ್ರ.ವರ್ಗ | ಕ.ಮಾ. | ಜನ್ಮ ದಿನಾಂಕ | ಸಿ.ಸಿ.ಇ. ಅಂಕಗಳು | ಪರಿಗಣಿಸಿದ ಸೇವಾ ವರ್ಷಗಳು | ಸೇವಾ ಕೃಪಾಂಕ | ಶೇ. ಒಟ್ಟು ಅಂಕಗಳು | ಪ್ರವರ್ಗಕ್ಕೆ ಮೀಸಲಿರಿಸಿ ಕಟ್-ಆಫ್ ಅಂಕಗಳು |
|---|---|---|---|---|---|---|---|---|---|---|---|
| 1 | 136373 | ಪ್ರದೀಪ್ ಕುಮಾರ್ ಹೆಚ್. | ಪುರುಷ | 3ಬಿ | ಹೌದು | 15/11/1982 | 56.35 | 01 | 05 | 61.35 | 60.40 % |

<u>ನಿಬಂಧನೆಗಳು:-</u>

1. ಈ ಆಯ್ಕೆಪಟ್ಟಿಯು ಭವಿಷ್ಯದಲ್ಲಿ ಬರಬಹುದಾದ ಮಾನ್ಯ ಉಚ್ಛ ನ್ಯಾಯಾಲಯಗಳ ತೀರ್ಪುಗಳು ಹಾಗೂ ಸರ್ಕಾರದ ತೀರ್ಮಾನಗಳಿಗೊಳಪಟ್ಟಿರುತ್ತದೆ.
2. ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ, ಹಿಂದುಗಳಿದ ವರ್ಗಗಳು, ಯೋಜನಾ ನಿರಾಶ್ರಿತರು, ಅಂಗವಿಕಲರು, ಕನ್ನಡ ಮಾಧ್ಯಮ, ಗ್ರಾಮೀಣ ಪ್ರದೇಶದ ಅಭ್ಯರ್ಥಿ, ಮಾಜಿ ಸೈನಿಕ ಮುಂತಾದ ಮೀಸಲಾತಿಯ ಪರಿಗಣನೆಗೆ ಅಭ್ಯರ್ಥಿಯು ಸಲ್ಲಿಸಿರುವ ಪ್ರಮಾಣ ಪತ್ರಗಳು ಸಂಬಂಧಪಟ್ಟ ಜಿಲ್ಲಾ ಪ್ರಾಧಿಕಾರ ಅಥವಾ ಸಕ್ಷಮ ಪ್ರಾಧಿಕಾರದಿಂದ ಸಿಂಧುತ್ವ ಪ್ರಮಾಣ ಪತ್ರ ಪಡೆದನಂತರ ಅಂಗೀಕರಿಸುವ ಷರತ್ತಿಗೆ ಒಳಪಟ್ಟಿರುತ್ತದೆ.
3. ಈ ಪಟ್ಟಿಯಲ್ಲಿನ ಅಭ್ಯರ್ಥಿಗಳ ನಡತೆ ಹಾಗೂ ಪೂರ್ವಚರಿತ್ರೆಗೆ **(Character and Antecedents)** ಸಂಬಂಧಿಸಿದಂತೆ **Police Verification** ಪಡೆಯುವ ಷರತ್ತಿಗೊಳಪಟ್ಟಿರುತ್ತದೆ.
4. ಈ ಪಟ್ಟಿಯಲ್ಲಿನ ಅಭ್ಯರ್ಥಿಗಳ ಶೈಕ್ಷಣಿಕ ಮೂಲದಾಖಲಾತಿಗಳ ನೈಜತೆ ಪರಿಶೀಲನೆ ಸಮಯದಲ್ಲಿ ವ್ಯತ್ಯಾಸ ಕಂಡುಬಂದಲ್ಲಿ ಅಂತಹ ಅಭ್ಯರ್ಥಿಗಳ ಆಯ್ಕೆಯು ತಂತಾನೇ ರದ್ದುಗೊಳ್ಳುವುದಲ್ಲದೇ, ಅಂತಹ ಅಭ್ಯರ್ಥಿಗಳ ವಿರುದ್ಧ ಕ್ರಿಮಿನಲ್ ಮೊಕದ್ದಮೆಯನ್ನು ಹೂಡಲಾಗುವುದು.
5. ಸೇವಾ ಕೃಪಾಂಕ ಪರಿಗಣನೆಗಾಗಿ ಅಭ್ಯರ್ಥಿಗಳು ತಾವು ಸಲ್ಲಿಸಿರುವ ನೇಮಕಾತಿ ಆದೇಶ, ಹಾಜರಾತಿ ವಹಿ, ವೇತನ ಬಟವಾಡೆ ವಿವರಗಳು, ವಯೋಮಾನಕ್ಕೆ ಸಂಬಂಧಿಸಿದ ದಾಖಲೆಗಳು ಹಾಗೂ ಇನ್ನಿತರ ಸೇವಾ ದಾಖಲಾತಿಗಳು ಭವಿಷ್ಯದಲ್ಲಿ ನೈಜವಲ್ಲವೆಂದು ಕಂಡುಬಂದಲ್ಲಿ ಅಂತಹ ಅಭ್ಯರ್ಥಿಗಳ ಆಯ್ಕೆಯು ತಂತಾನೇ ರದ್ದುಗೊಳ್ಳುವುದಲ್ಲದೇ, ಅಂತಹ ಅಭ್ಯರ್ಥಿಗಳ ವಿರುದ್ಧ ಕ್ರಿಮಿನಲ್ ಮೊಕದ್ದಮೆಯನ್ನು ಹೂಡಲಾಗುವುದು ಹಾಗೂ ಪಾವತಿಸಿದ ವೇತನವನ್ನು ವಸೂಲುಮಾಡಲಾಗುವುದು.
6. ಈ ಆಯ್ಕೆಪಟ್ಟಿಯಲ್ಲಿ ಹೆಸರು ಇದ್ದ ಮಾತ್ರಕ್ಕೆ, ಅಭ್ಯರ್ಥಿಗಳು ಸದರಿ ಹುದ್ದೆಗೆ ಆಯ್ಕೆಯಾಗಿದ್ದಾರೆಂದು ಭಾವಿಸಬಾರದು. ಹೆಸರನ್ನು ಪ್ರಕಟಿಸಿದ ಮಾತ್ರಕ್ಕೆ ಅಭ್ಯರ್ಥಿಗೆ ಯಾವುದೇ ಹಕ್ಕು ಇರುವುದಿಲ್ಲ.
7. ಈ ಆಯ್ಕೆಪಟ್ಟಿಯಲ್ಲಿರುವ ಅಭ್ಯರ್ಥಿಗಳು ವೈದ್ಯಕೀಯ ದೇಹದಾರ್ಢ್ಯತೆ ಪ್ರಮಾಣ ಪತ್ರವನ್ನು ಜಿಲ್ಲಾ ವೈದ್ಯಾಧಿಕಾರಿ/ಜಿಲ್ಲಾ ಸರ್ಜನ್ ಶ್ರೇಣಿಯ ಅಧಿಕಾರಿಗಳಿಂದ ಪಡೆಯುವ ಷರತ್ತಿಗೆ ಒಳಪಟ್ಟಿರುತ್ತದೆ.
8. ಈ ಆಯ್ಕೆಪಟ್ಟಿಯು ಮಾನ್ಯ ಉಚ್ಛ ನ್ಯಾಯಾಲಯದ ರಿಟ್ ಅರ್ಜಿ ಸಂಖ್ಯೆ:104065-80/2015 **(S-RES)** ರ ಹಾಗೂ ಮಾನ್ಯ ಉಚ್ಛ ನ್ಯಾಯಾಲಯಗಳ ಇತರ ಯಾವುದೇ ಅಂತಿಮ ಆದೇಶಗಳಿಗೆ ಒಳಪಟ್ಟಿರುತ್ತದೆ.

ಕಾರ್ಯನಿರ್ವಾಹಕ ನಿರ್ದೇಶಕರು
ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ,
ಬೆಂಗಳೂರು.

<u>ಪ್ರತಿಯನ್ನು:-</u>

1. ಗೌರವಗಳೊಂದಿಗೆ, ಸನ್ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತಕಾರ್ಯದರ್ಶಿಗಳ ಮಾಹಿತಿಗಾಗಿ ಸಲ್ಲಿಸಿದೆ. ಸದರಿ ಅಂಶವನ್ನು ಮಾನ್ಯ ಸಚಿವರ ಗಮನಕ್ಕೆ ತರಲು ಕೋರಲಾಗಿದೆ.
2. ಮಾನ್ಯ ಸರ್ಕಾರದ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ, ವಿಕಾಸ ಸೌಧ, ಬೆಂಗಳೂರು ಇವರ ಮಾಹಿತಿಗಾಗಿ ಸಲ್ಲಿಸಿದೆ.
3. ಮಾನ್ಯ ಸರ್ಕಾರದ ಕಾರ್ಯದರ್ಶಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು ಇವರ ಅವಗಾಹನೆಗೆ ಸಲ್ಲಿಸಿದೆ.
4. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು, ಇವರ ಮಾಹಿತಿಗಾಗಿ ಸಲ್ಲಿಸಿದೆ.
5. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು ಇವರ ಮಾಹಿತಿಗಾಗಿ.
6. ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು ಇವರಿಗೆ ಮಾಹಿತಿಗಾಗಿ.
7. ಸಂಬಂಧಿಸಿದ ಅಭ್ಯರ್ಥಿಗೆ.
8. ಕಛೇರಿ ಪ್ರತಿ.

ಕಾರ್ಯನಿರ್ವಾಹಕ ನಿರ್ದೇಶಕರು
ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ,
ಬೆಂಗಳೂರು.